ಬೈಕ್ ಆ್ಯಂಬುಲೆನ್ಸ್ ಸೇವೆ ನಿಷೇಧಗೊಳಿಸಿ ಆದೇಶ

ಬೆಂಗಳೂರು: ಕರ್ನಾಟಕದಲ್ಲಿ ಬೈಕ್ ಆ್ಯಂಬುಲೆನ್ಸ್ ಸೇವೆ ಸ್ಥಗಿತಗೊಳಿಸಿ ರಾಜ್ಯ ಆರೋಗ್ಯ ಇಲಾಖೆ ಆದೇಶಿಸಿದೆ. ರಾಜ್ಯದಲ್ಲಿ 108 ಆ್ಯಂಬುಲೆನ್ಸ್ ಸೇವೆ ಹೆಚ್ಚಿರುವುದರಿಂದ ರಾಜ್ಯದಲ್ಲಿ ಬೈಕ್ ಆ್ಯಂಬುಲೆನ್ಸ್ ಸೇವೆ ಅಗತ್ಯವಿಲ್ಲ ಎಂದು ನಿರ್ಧರಿಸಿ ಬೈಕ್ ಆ್ಯಂಬುಲೆನ್ಸ್ ಸೇವೆ ನಿಷೇಧಗೊಳಿಸಿದೆ. ಕರೆ ಮಾಡಿದ ಕೂಡಲೇ 108 ಆ್ಯಂಬುಲೆನ್ಸ್ ಸೇವೆ ಸಿಗುತ್ತದೆ, ಹಾಗಿದ್ದಾಗ ಬೈಕ್ ಆ್ಯಂಬುಲೆನ್ಸ್ ಸೇವೆಯ ಅಗತ್ಯವಿಲ್ಲ ಎಂದು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ರಾಜ್ಯ ಆರೋಗ್ಯ ಇಲಾಖೆಯ ಆಯುಕ್ತ ಡಿ.ರಂದೀಪ್ ತಿಳಿಸಿದ್ದಾರೆ.

ತಾಂತ್ರಿಕ ದೋಷದಿಂದ ಸ್ಥಗಿತಗೊಂಡಿದ್ದ 108 ಆ್ಯಂಬುಲೆನ್ಸ್ ಸೇವೆ ಸಹಾಯವಾಣಿಯ ತಾಂತ್ರಿಕ ದೋಷ ನಿವಾರಣೆಯಾಗಿದ್ದು, ಸೋಮವಾರ ಯಿಂದ ಎಂದಿನಂತೆ ಕಾರ್ಯಾಚರಣೆ ನಡೆಸುತ್ತಿದೆ. 108 ಆ್ಯಂಬುಲೆನ್ಸ್ ಸೇವೆ ನಿರ್ವಹಿಸುತ್ತಿರುವ ಜಿವಿಕೆ ಸಂಸ್ಥೆಯ ತಂತ್ರಾಂಶದಲ್ಲಿ ಶನಿವಾರ ಸಂಜೆಯಿಂದ ಸಮಸ್ಯೆ ಕಾಣಿಸಿಕೊಂಡಿತ್ತು. ಹೀಗಾಗಿ ಕರೆಗಳನ್ನು ಸ್ವೀಕರಿಸಲಾಗದೇ ಸಾಧ್ಯವಾಗದೇ ಆ್ಯಂಬುಲೆನ್ಸ್ ಗಳು ಲಭ್ಯವಾಗದೆ ರೋಗಿಗಳು ಪರದಾಡುವಂತಾಗಿತ್ತು. ಸೋಮವಾರ 108 ಆ್ಯಂಬುಲೆನ್ಸ್ ಸಹಾಯವಾಣಿಯಲ್ಲಿ ತಾಂತ್ರಿಕ ದೋಷ ಸರಿಪಡಿಸಲಾಗಿದ್ದು, ಸಹಜ ಸ್ಥಿತಿಗೆ 108 ಆ್ಯಂಬುಲೆನ್ಸ್ ಸೇವೆ ಮರಳಿದೆ.

ವಿಧಾನಸೌಧಕ್ಕೆ ಮಂಗಳವಾರ ಆಗಮಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ನೋಡಲು ಆಗಮಿಸಿದ್ದ ವಿದ್ಯಾರ್ಥಿಗಳು. ಚಿತ್ರಗಳು: ಸುಧಾಕರ್ ದೇವರಾಜ್

ಈದ್ಗಾ ಮೈದಾನದಲ್ಲಿ ರಾಜ್ಯೋತ್ಸವಕ್ಕೆ ಮನವಿ

ಬೆಂಗಳೂರು: ಚಾಮರಾಜಪೇಟೆ ಈದ್ಗಾ ಮೈದಾನದಲ್ಲಿ ಗಣೇಶೋತ್ಸವಕ್ಕೆ ಅನುಮತಿ ಸಿಗದ ಕಾರಣ ನಿರಾಸೆಗೊಂಡಿದ್ದ ಸಂಘಪರಿವಾರದ ಸಂಘಟನೆಗಳು, ಇದೀಗ ಕನ್ನಡ ರಾಜ್ಯೋತ್ಸವ ಆಚರಣೆಗೆ ಪಟ್ಟು ಹಿಡಿದಿದ್ದಾರೆ.

ಕೇವಲ ಕನ್ನಡ ಪರ ಹಾಗೂ ಹಿಂದೂಪರ ಸಂಘಟನೆಗಳಲ್ಲದೆ ಕನ್ನಡ ಸಾಹಿತ್ಯ ಪರಿಷತ್ ಕೂಡ ನ.1ರಂದು ಆಚರಿಸುವ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಕನ್ನಡ ಧ್ವಜ ಹಾರಿಸಲು ಅನುಮತಿ ನೀಡುವಂತೆ ಸರಕಾರಕ್ಕೆ ಮನವಿ ಮಾಡಲಾಗಿದೆ. ಚಾಮರಾಜಪೇಟೆ ನಾಗರೀಕರ ಒಕ್ಕೂಟದ ಸಭೆಯಲ್ಲಿ ಕನ್ನಡ ಧ್ವಜ ಹಾರಾಟಕ್ಕೆ ಅನುಮತಿ ನೀಡುವಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಕಂದಾಯ ಸಚಿವ ಆರ್.ಅಶೋಕ್ ಅವರನ್ನು ಭೇಟಿಯಾಗಿ ಮನವಿ ಮಾಡಲು ನಿರ್ಧರಿಸಲಾಗಿದೆ ಎಂದು ಒಕ್ಕೂಟದ ಖಜಾಂಚಿ ಯಶವಂತ್ ತಿಳಿಸಿದ್ದಾರೆ. ಕನ್ನಡ ಧ್ವಜ ಹಾರಿಸಲು ಒಕ್ಕೂಟಕ್ಕೆ ಅವಕಾಶ ಮಾಡಿಕೊಡುವಂತೆ ನಾವು ಪಟ್ಟು ಹಿಡಿಯುವುದಿಲ್ಲ. ಕಳೆದ 2006ರಲ್ಲೇ ಶಾಸಕ ಜಮೀರ್ ಅಹ್ಮದ್ ಖಾನ್ ಅವರು ಮೈದಾನದಲ್ಲಿ ಕನ್ನಡ ಧ್ವಜ ಹಾರಿಸುವುದಾಗಿ ಹೇಳಿಕೆ ನೀಡಿದ್ದರು. ಈಗಲೂ ಅವರೇ ಧ್ವಜ ಹಾರಿಸಲಿ ಎಂದು ಅವರು ಸಲಹೆ ನೀಡಿದರು.

ಸಮಾಚಾರ ಸಣ್ಣದಲ್ಲ

ಬನ್ನೇರುಘಟ್ಟ ಜೈವಿಕ ಉದ್ಯಾನಕ್ಕೆ ಪ್ರವೇಶ

ಬೆಂಗಳೂರು: ಬನ್ನೇರುಘಟ್ಟ ಜೈವಿಕ ಉದ್ಯಾನವು ಅ.4ರಂದು ಜೈವಿಕ ಉದ್ಯಾನವನ ವೀಕ್ಷಣೆಗೆ ಅವಕಾಶ ನೀಡಿದೆ. ಆಯುಧ ಪೂಜೆ ಹಿನ್ನೆಲೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಉದ್ಯಾನ ವೀಕ್ಷಣೆಗೆ ಆಗಮಿಸುವುದರಿಂದ ವೀಕ್ಷಣೆಗೆ ಅನುಕೂಲವಾಗುವಂತೆ ಆ ದಿನದಂದು ಉದ್ಯಾನವನದ ಮೃಗಾಲಯ, ಸಫಾರಿ ಮತ್ತು ಚಿಟ್ಟೆ ಉದ್ಯಾನವನ ಇವುಗಳನ್ನು ತೆರೆದಿಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ

ಬೆಂಗಳೂರು: ನೇಕಾರ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು ವಿದ್ಯಾರ್ಥಿ ವೇತನ ನೀಡುವ ಯೋಜನೆಯನ್ನು ನೇಕಾರ ಸಮ್ಮಾನ್ ಯೋಜನೆಯಡಿ ಅನುಷ್ಠಾನಗೊಳಿಸಿದೆ. ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು,ವಿವಿಗಳಲ್ಲಿ ಪಿ.ಯು.ಸಿ,ಐ.ಟಿ.ಐ,ಡಿಪ್ಲೊಮಾ,ಬಿ.ಎ,ಬಿ.ಎಸ್.ಸಿ,ಬಿ.ಕಾಂ, ಎಲ್.ಎಲ್.ಬಿ,ಪ್ಯಾರಾಮೆಡಿಕಲ್,ಬಿ.ಫಾರ್ಮ್,ನರ್ಸಿಂಗ್ ಕೋರ್ಸ್‌ಗಳು, ಎಂ.ಬಿ.ಬಿ.ಎಸ್,ಬಿ.ಇ, ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ನ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಬೇಕು. ನೋಂದಾಯಿತ ನೇಕಾರರ ಮಕ್ಕಳನ್ನು ಗುರುತಿಸುವ ಸಲುವಾಗಿ ಸೇವಾ ಸಿಂಧು ತಂತ್ರಾಂಶದ ಕರ್ನಾಟಕ ಒನ್ ಮತ್ತು ಗ್ರಾಮ, ಒನ್ ರಲ್ಲಿ ಈ ಸೇವೆ ಲಭ್ಯ ವಿದ್ದು, ನಿಗದಿತ ಶುಲ್ಕವನ್ನು ಪಾವತಿಸಿ ಅರ್ಜಿಯನ್ನು ಸಲ್ಲಿಸುವುದು. ಹೆಚ್ಚಿನ ಮಾಹಿತಿಗೆ ಇಲಾಖೆಯ ವೆಬ್‌ಸೈಟ್ www.karnatakadht.org ನ್ನು ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ವಿಶ್ವ ರೇಬೀಸ್ ದಿನಾಚರಣೆ

ಬೆಂಗಳೂರು: ಕೇಂದ್ರ ಸರಕಾರದ ಪಶು ಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆ, ಪಶುಪಾಲನಾ ಇಲಾಖೆ ಸಂಯುಕ್ತಾಶ್ರಯದಲ್ಲಿ ವಿಶ್ವ ರೇಬೀಸ್ -2022 ಕಾರ್ಯಕ್ರಮವನ್ನು ಸೆ. 28 ಬೆಳಗ್ಗೆ 10 ಗಂಟೆಗೆ ಹೆಬ್ಬಾಳದ ಕರ್ನಾಟಕ ಪಶು ವೈದ್ಯಕೀಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಭಾರತ ಸರಕಾರದ ಪಶು ಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆಯ ಜಂಟಿ ಕಾರ್ಯದರ್ಶಿಗಳು, ರಾಜ್ಯ ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಕಾರ್ಯದರ್ಶಿ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿ ವಿಚಾರಧಾರೆ ಮಂಡಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

249 ಮಂದಿಗೆ ಕರೋನಾ ಸೋಂಕು

ಬೆಂಗಳೂರು: ರಾಜ್ಯದಲ್ಲಿ ಕರೋನಾ ಪಾಸಿಟಿವ್ ಪ್ರಕರಣಗಳ ಸಂಖ್ಯೆಯಲ್ಲಿ ಏರಿಳಿತ ಮುಂದುವರಿದಿದ್ದು, ಕಳೆದ 24 ಗಂಟೆಯಲ್ಲಿ249 ಮಂದಿಗೆ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ಸೋಂಕಿತರ ಸಂಖ್ಯೆ 40,63,887ಕ್ಕೆ ಏರಿಕೆಯಾಗಿದೆ. ಕರೋನಾದಿಂದ ಇಂದು ಯಾವುದೇ ಸಾವು ವರದಿಯಾಗಿಲ್ಲ. ಹೀಗಾಗಿ ಸಾವಿನ ಸಂಖ್ಯೆ 40239 ಇದೆ. ರಾಜ್ಯದಲ್ಲಿ ಸೋಮವಾರ 501 ಸೋಂಕಿತರು ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಇದರೊಂದಿಗೆ ಸೋಂಕಿನಿಂದ ಚೇತರಿಸಿಕೊಂಡವರ ಸಂಖ್ಯೆ 4021041ಕ್ಕೆ ಏರಿಕೆಯಾಗಿದೆ. ಇನ್ನು 2565 ಸಕ್ರಿಯ ಪ್ರಕರಣಗಳಿವೆ. ಬೆಂಗಳೂರಿನಲ್ಲಿ ಒಂದೇ ದಿನ 186 ಮಂದಿಗೆ ಸೋಂಕು ದೃಢಪಟ್ಟಿದೆ. ಇದರೊಂದಿಗೆ ನಗರದಲ್ಲಿ ಸೋಂಕಿತರ ಸಂಖ್ಯೆ 1871466ಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

{ ಗೋವಿಂದ ಕಾರಜೋಳ } ಸಚಿವ

60 ವರ್ಷ ಕಾಂಗ್ರೆಸ್ ದೇಶದ ಉದ್ದಗಲಕ್ಕೂ ಆಡಳಿತ ನಡೆಸಿದೆ. ಆದರೆ, ಸಾಧನೆ ಶೂನ್ಯ. ವೋಟಿಗಾಗಿ ಜಾತಿ, ಧರ್ಮದ ನಡುವೆ ಗಲಭೆ ಮಾಡಿದರು. ದೇಶ ಇಬ್ಭಾಗ ಮಾಡಿದರು. ಇದರ ಪ್ರಾಯಚಿತ್ತಕ್ಕಾಗಿ ಭಾರತ ಜೋಡೊ ಯಾತ್ರೆ ಮಾಡುತ್ತಿದ್ದಾರೆ. ಭ್ರಷ್ಟಾಚಾರದ ಬಗ್ಗೆ ಮಾತನಾಡಲು ಕಾಂಗ್ರೆಸ್‌ಗೆ ನೈತಿಕತೆ ಇಲ್ಲ.

ಎಕ್ಸೈಡ್ ಕಂಪನಿಯ ಬ್ಯಾಟರಿ ಉತ್ಪಾದನಾ ಘಟಕಕ್ಕೆ ಸಿಎಂ ಬೊಮ್ಮಾಯಿ ಭೂಮಿ ಪೂಜೆ

ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ರಾಜ್ಯ ಮುಂಚೂಣಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು, ದೇಶದ ಒಟ್ಟು ನವೀಕರಿಸಬಹುದಾದ ಇಂಧನದ ಪೈಕಿ ಶೇ. 50ರಷ್ಟು ರಾಜ್ಯದಲ್ಲಿ ಉತ್ಪಾದನೆಯಾಗುತ್ತಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅಲ್ಲದೆ, ವೈಜ್ಞಾನಿಕ ಅಭಿವೃದ್ಧಿ ಹಾಗೂ ವಿಜ್ಞಾನದ ಬಳಕೆಗೆ ಬೆಂಗಳೂರು ಪ್ರಶಸ್ತ ಸ್ಥಳವಾಗಿದೆ. ಐಟಿ-ಬಿಟಿ, ಕೃತಕ ಬುದ್ದಿಮತ್ತೆ ಹೀಗೆ ತಂತ್ರಜ್ಞಾನದ ಎಲ್ಲ ಆಯಾಮಗಳು ಕರ್ನಾಟಕದಲ್ಲಿ ಹೊಸ ರೂಪವನ್ನು ಪಡೆಯುತ್ತಿವೆ. ಕರ್ನಾಟಕದಲ್ಲಿ ಆಧುನಿಕ ವೈಜ್ಞಾನಿಕ ತಂತ್ರಜ್ಞಾನಗಳನ್ನು ಸಂಘಟಿತವಾಗಿ ಬಳಕೆ ಮಾಡುವ ವ್ಯವಸ್ಥೆ ಹಾಗೂ ವಾತಾವರಣ ಇದೆ. ಇದರ ಲಾಭವನ್ನು ಉದ್ಯಮಗಳು ಪಡೆದುಕೊಳ್ಳಬೇಕು ಎಂದರು.

ದೇವನಹಳ್ಳಿ ಸಮೀಪದ ಹರಳೂರಿನಲ್ಲಿರುವ ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್‌ನಲ್ಲಿ ಎಕ್ಸೈಡ್ ಕಂಪನಿಯ ಸುಸಜ್ಜಿತ ಲಿಥಿಯಂ ಅಯಾನ್ ಬ್ಯಾಟರಿ ಉತ್ಪಾದನಾ ಘಟಕದ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಎಕ್ಸೈಡ್ ಕಂಪನಿಯ ಘಟಕದಲ್ಲಿ ಸ್ಥಳೀಯ ಜನರಿಗೆ ಉದ್ಯೋಗಾವಕಾಶ ನೀಡುವ ಬಗ್ಗೆ ಸಂಸ್ಥೆ ಗಮನಹರಿಸಬೇಕಿದೆ. ಸರಕಾರ ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ, ಆಧುನಿಕ ತಂತ್ರಜ್ಞಾನದ ಬಗ್ಗೆ ತರಬೇತಿಯನ್ನು ಯುವಕರಿಗೆ ನೀಡುತ್ತಿದೆ. ಸಂಸ್ಥೆಯ ಘಟಕದ ನಿರ್ಮಾಣಕ್ಕೆ ಜಮೀನು ನೀಡಿದ ಸ್ಥಳೀಯರ ಕುಟುಂಬಗಳಿಗೆ ಉದ್ಯೋಗ ನೀಡುವ ಮೂಲಕ ಪರಸ್ಪರ ಸಹಕರಿಸಬೇಕಿದೆ ಎಂದರು.

ಉತ್ಪಾದನಾ ವಲಯದಲ್ಲೂ ರಾಜ್ಯ ನಂ.1 ಆಗಬೇಕು: ಐಟಿ-ಬಿಟಿ ಸಚಿವ ಡಾ.ಸಿ.ಎನ್.ಅಶ್ವತ್ಥ ನಾರಾಯಣ ಮಾತನಾಡಿ, ಎರಡು-ಮೂರು ದಶಕಗಳಿಂದಲೂ ಸೇವಾ ವಲಯದಲ್ಲಿ ಅಗ್ರಸ್ಥಾನವನ್ನು ಅಲಂಕರಿಸಿರುವ ರಾಜ್ಯವು ಉತ್ಪಾದನಾ ವಲಯದಲ್ಲೂ ಮುಂಚೂಣಿಗೆ ಬಂದು ನಂ.1 ಆಗಬೇಕು. ಕರ್ನಾಟಕವು ಅತ್ಯುತ್ತಮ ಕೈಗಾರಿಕಾ ಕಾರ್ಯ ಪರಿಸರ ಮತ್ತು ನೀತಿಗಳನ್ನು ಹೊಂದಿದೆ. ಪರಿಸರಕ್ಕೆ ಪೂರಕವಾಗಿ ಉದ್ಯಮಗಳನ್ನು ಬೆಳೆಸಬೇಕು ಎನ್ನುವುದು ರಾಜ್ಯ ಸರ್ಕಾರದ ಗುರಿಯಾಗಿದೆ ಎಂದು ಹೇಳಿದರು.

ದೇವನಹಳ್ಳಿ ಸಮೀಪದ ಹರಳೂರಿನಲ್ಲಿರುವ ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್‌ನಲ್ಲಿ ಎಕ್ಸೈಡ್ ಕಂಪನಿಯ ಸುಸಜ್ಜಿತ ಲಿಥಿಯಂ ಅಯಾನ್ ಬ್ಯಾಟರಿ ಉತ್ಪಾದನಾ ಘಟಕಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭೂಮಿಪೂಜೆ ನೆರವೇರಿಸಿದರು. ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ, ಎಕ್ಸೈಡ್ ಕಂಪನಿಯ ಸಿಇಒ ಸುನೀಲ್ ಚಕ್ರವರ್ತಿ ಮತ್ತಿತರರು ಇದ್ದರು.

ಆವಿಷ್ಕಾರ ಕ್ಷೇತ್ರದಲ್ಲಿ ಕರ್ನಾಟಕ ನಂಬರ್ 1

ಕರ್ನಾಟಕ ರಾಜ್ಯಕ್ಕೆ ಹೆಚ್ಚಿನ ಮೊತ್ತದ ವಿದೇಶಿ ಬಂಡವಾಳ ಹರಿದು ಬರುತ್ತಿದ್ದು, ವಿಶ್ವಮಟ್ಟದ ಆರ್ ಆ್ಯಂಡ್ ಡಿ ಕೇಂದ್ರಗಳನ್ನು ಹೊಂದಿದೆ. 400 ಫಾರ್ಚೂನ್ ಕಂಪನಿಗಳು ರಾಜ್ಯದಲ್ಲಿದೆ. ನೀತಿ ಆಯೋಗದ ಮಾಹಿತಿಯಂತೆ ಆವಿಷ್ಕಾರ ಕ್ಷೇತ್ರದಲ್ಲಿ ಕರ್ನಾಟಕ ಒಂದನೇ ಶ್ರೇಯಾಂಕವನ್ನು ತನ್ನದಾಗಿಸಿಕೊಂಡಿದೆ. ಜಗತ್ತಿನಲ್ಲೇ ಖ್ಯಾತವಾದ ಎಕ್ಸೈಡ್ ಕಂಪನಿ 12 ಗಿಗಾಬೈಟ್ ಸಾಮರ್ಥ್ಯದ ಬ್ಯಾಟರಿ ತಯಾರಿಸುವ ಭಾರತದಲ್ಲಿಯೇ ಅತಿ ದೊಡ್ಡ ಘಟಕ ಬೆಂಗಳೂರಿನಲ್ಲಿ ನಿರ್ಮಾಣ ಮಾಡುತ್ತಿರುವುದು ಶ್ಲಾಘನೀಯ ಎಂದು ಸಿಎಂ ಬೊಮ್ಮಾಯಿ ಹೇಳಿದರು.

ರಾಜ್ಯದ ಉದ್ದಗಲಕ್ಕೂ ವಿಕೇಂದ್ರೀಕೃತ ಮಾದರಿಯಲ್ಲಿ ಉದ್ಯಮಗಳು ನೆಲೆಯೂರಬೇಕು. ಇದಕ್ಕಾಗಿ ಎರಡು ಮತ್ತು ಮೂರನೇ ಸ್ತರದ ನಗರಗಳ ಔದ್ಯಮಿಕ ಬೆಳವಣಿಗೆಗೂ ಸ್ಪಷ್ಟ ನೀತಿ ರೂಪಿಸಲಾಗಿದೆ. ಬೆಂಗಳೂರನ್ನು ಬಿಟ್ಟು ಹೊರಗಿನ ಸ್ಥಳಗಳಲ್ಲಿ ಉದ್ದಿಮೆ ಸ್ಥಾಪಿಸುವವರಿಗೆ ಅನೇಕ ರೀತಿಯ ಪ್ರೋತ್ಸಾಹ ಮತ್ತು ರಿಯಾಯಿತಿ ನೀಡಲಾಗುತ್ತಿದೆ. ರಾಜ್ಯದಲ್ಲಿ ಕೈಗಾರಿಕಾ ಕ್ರಾಂತಿ 4.0 ಈಗ ನಡೆಯುತ್ತಿದೆ. ಈ ಮೂಲಕ ನಿರುದ್ಯೋಗ ಸಮಸ್ಯೆ ನಿವಾರಣೆ ಆಗಲಿದೆ.

-ಡಾ.ಸಿ.ಎನ್.ಅಶ್ವತ್ಥ ನಾರಾಯಣ ಐಟಿ-ಬಿಟಿ ಸಚಿವ

ಶ್ವಾಸಕೋಶದ ಸಮಸ್ಯೆಗೆ ಶಸ್ತ್ರಚಿಕಿತ್ಸೆ ಇಲ್ಲದೇ ಪರಿಹಾರ

ಬೆಂಗಳೂರು: ಅಸ್ತಮಾ ಸೇರಿದಂತೆ ವಿವಿಧ ಉಸಿರಾಟದ ಸಮಸ್ಯೆ ಹೊಂದಿರುವ ನಾಗರಿಕರಿಗೆ ಪರಿಹಾರ ಕಲ್ಪಿಸುವ ವಿನೂತನ ಚಿಕಿತ್ಸಾ ವಿಧಾನವನ್ನು ಅಪೋಲೋ ಆಸ್ಪತ್ರೆ ಬೆಂಗಳೂರಿನಲ್ಲಿ ಆರಂಭಿಸಿದೆ.

ಉಸಿರಾಟದ ಸಮಸ್ಯೆ ಹೊಂದಿರುವವರಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ದೇಶದಲ್ಲೇ ಹೈದರಾಬಾದ್ ನಂತರ ಕರ್ನಾಟಕದಲ್ಲಿ ಆರಂಭವಾಗುತ್ತಿದ್ದು, ಉಸಿರಾಡಲು ತುಂಬಾ ಸಮಸ್ಯೆ ಅನುಭವಿಸುತ್ತಿರುವವರಿಗಾಗಿ ಸಿವಿಯರ್ ಏರ್ ಕ್ಲಿನಿಕ್ ಆರಂಭಿಸಿದೆ. ಈ ಚಿಕಿತ್ಸೆ ಮೂಲಕ ಉಸಿರಾಟವನ್ನು ಸುಗಮವಾಗಿಸುವ ಕಾರ್ಯಕ್ಕೆ ಅವಕಾಶ ಮಾಡಿಕೊಡಲಾಗುತ್ತದೆ. ಕೋವಿಡ್ ನಂತರದ ದಿನಗಳಲ್ಲಿ ಸಾಕಷ್ಟು ಮಂದಿ ಉಸಿರಾಟದ ಹಾಗೂ ಶ್ವಾಸಕೋಶದ ಸೋಂಕಿನಿಂದ ಬಳಲುತ್ತಿದ್ದು, ಇದಕ್ಕೊಂದು ಪರಿಹಾರ ಹುಡುಕುವ ಕಾರ್ಯ ಆಗಿದೆ.

ಸಿಒಪಿಡಿಗೆ ಈಗ ಹೊಸ ಚಿಕಿತ್ಸಾ ಪದ್ಧತಿ: ಅಸ್ತಮಾ, ಸಿಒಪಿಡಿ ಸಮಸ್ಯೆ ಸೇರಿದಂತೆ ವಿವಿಧ ರೀತಿಯ ಸಮಸ್ಯೆಗಳಿಗೆ ಒಂದೇ ಸೂರಿನ ಅಡಿ ಚಿಕಿತ್ಸೆ ನೀಡುವ ವ್ಯವಸ್ಥೆ ಇದಾಗಿದೆ. ಅಸ್ತಮಾ ಹಾಗೂ ಸಿಒಪಿಡಿ ಸಮಸ್ಯೆ ಉಲ್ಬಣಗೊಂಡಿರುವ ರೋಗಿಗಳಿಗೆ ಇದು ರಾಮಬಾಣವಾಗಿದೆ. ಉಸಿರಾಟದ ಸಮಸ್ಯೆಗೆ ಔಷಧ ನೀಡುವುದು ಒಂದು ಪರಿಹಾರ ಕ್ರಮವಾದರೆ ಚಿಕಿತ್ಸೆ ಮತ್ತೊಂದು ವಿಧದ ಕ್ರಮವಾಗಿದೆ. ಸಿಒಪಿಡಿಗೆ ಈಗ ಹೊಸ ಚಿಕಿತ್ಸಾ ಪದ್ಧತಿ ಬಂದಿದೆ. ಇಂಟರ್‌ವೆರರ್ ಫಾರ್ ಥೆರಪಿ ಹೆಸರಿನಲ್ಲಿ ಇದನ್ನು ಆರಂಭಿಸಲಾಗುತ್ತಿದೆ ಎಂದು ಬೆಂಗಳೂರಿನ ಅಪೋಲೋ ಹಾಸ್ಪಿಟಲ್‌ನ ಪಲ್ಮನಾಲಜಿ ಎಂಡ್ ಕ್ರಿಟಿಕಲ್ ಕೇರ್ ವಿಭಾಗದ ಮುಖ್ಯಸ್ಥರಾದ ಡಾ. ರವೀಂದ್ರ ಎಂ. ಮೆಹ್ತಾ ತಿಳಿಸಿದ್ದಾರೆ.

ಆನೇಕಲ್‌ನಲ್ಲಿ ದಸರೆಗೆ ಭವ್ಯ ಸಿದ್ಧತೆ

ಆನೇಕಲ್: ಆನೇಕಲ್ಲಿನ ಗ್ರಾಮ ದೇವತೆ ಶ್ರೀ ಚೌಡೇಶ್ವರಿ ಅಮ್ಮನವರಿಗೆ ಶರನ್ನವರಾತ್ರಿ ಅಂಗವಾಗಿ 9 ದಿನ ವಿಶೇಷ ಅಲಂಕಾರ, ಪೂಜೆ, ಪ್ರಸಾದ ವಿನಿಯೋಗ ಮತ್ತು ವೇದಿಕೆಯಲ್ಲಿ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅ. 5 ಬುಧವಾರ ವಿಜಯ ದಶಮಿಯ ದಿನ ಅಂಬಾರಿ ಉತ್ಸವವನ್ನು ಅದ್ದೂರಿಯಾಗಿ ಏರ್ಪಡಿಸಲಾಗಿದೆ ಎಂದು ಚೌಡೇಶ್ವರಿ ದೇವಾಲಯ ಸೇವಾ ಸಮಿತಿ ಹಾಗೂ ತೊಗಟ ವೀರ ಯುವ ವೇದಿಕೆಯ ಪದಾಧಿಕಾರಿಗಳು ತಿಳಿಸಿದರು.

ಬುಧವಾರ ವಿಜಯದಶಮಿ ಪ್ರಯುಕ್ತ ಸರ್ವಾಲಂಕಾರ ಏರ್ಪಡಿಸಿದ್ದು ವಿಶೇಷ ದೀಪಾಲಂಕಾರ, ಪುಷ್ಪಾ ಲಂಕಾರ, ಇಡೀ ದಿನ ಅನ್ನದಾಸೋಹ, ಅಂಬಾರಿ ಉತ್ಸವ, ಪುರ ಮೆರವಣಿಗೆ ಯಲ್ಲಿ ರಾಜ್ಯ, ಹೊರ ರಾಜ್ಯಗಳ 30ಕ್ಕೂ ಹೆಚ್ಚು ಜಾನಪದ ತಂಡಗಳಿಂದ ಪುರ ಮೆರವಣಿಗೆಯಲ್ಲಿ ಕಲಾ ಪ್ರದರ್ಶನ, ಬಾಣ ಬಿರುಸು ಏರ್ಪಡಿಸಲಾಗಿದೆ. ಕಳೆದ ಸಾಲಿನಲ್ಲಿ 1 ಲಕ್ಷಕ್ಕೂ ಹೆಚ್ಚು ಭಕ್ತಾದಿಗಳು ದರ್ಶನ ಪಡೆದಿದ್ದು ಈ ಬಾರಿಗೆ ಇನ್ನೂ ಹೆಚ್ಚು ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಆನೇಕಲ್ ನಾಗರಿಕರೂ ಸೇರಿದಂತೆ ಎಲ್ಲ ಇಲಾಖೆಗಳ ಸಹಕಾರವಿದ್ದು, ದಾನಿಗಳ ನೆರವನ್ನು ಸಮಿತಿಯು ಸದಾ ಸ್ಮರಿಸುತ್ತದೆ ಎಂದರು.

ಸಚಿವರ, ಸಿಎಂ ಮನೆ ಮುಂದೆ ಬೋರ್ಡ್ ಹಾಕಿ

ಬೆಂಗಳೂರು: ಲಂಚ ಸ್ವೀಕರಿಸುವುದಿಲ್ಲ ಎನ್ನುವ ಫಲಕವನ್ನು ಸರಕಾರಿ ಕಚೇರಿಗಳ ಬದಲಿಗೆ, ಮುಖ್ಯಮಂತ್ರಿಗಳ ಹಾಗೂ ಸಚಿವರ ಮನೆಗಳ ಮುಂದೆ ಹಾಕುವಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ವ್ಯಂಗ್ಯವಾಡಿದ್ದಾರೆ.

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಅವರು, ನಾವು ಲಂಚ ಸ್ವೀಕರಿಸುವುದಿಲ್ಲ ಎಂಬ ಫಲಕವನ್ನು ನಿಮ್ಮ ಹಾಗೂ ನಿಮ್ಮ ಸಚಿವರ ಮನೆ, ಕಚೇರಿ ಮುಂದೆ ಹಾಕಿಸಿ. 'ನನಗೆ ಲಂಚ ಕೊಡಬೇಕಾಗಿಲ್ಲ, ನಾನು ಭ್ರಷ್ಟ ಅಧಿಕಾರಿಯಾಗಲಾರೆ' ಎಂದು ಸರಕಾರಿ ಕಚೇರಿಗಳಲ್ಲಿ ರಾಜ್ಯ ಬಿಜೆಪಿ ಸರಕಾರ ಬೋರ್ಡ್ ಹಾಕಿಸುತ್ತಂತೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರೇ, ಮೊದಲು ನಿಮ್ಮ ಮತ್ತು ಸಚಿವರ ಕಚೇರಿಗಳು ಹಾಗೂ ಮನೆ ಮುಂದೆ ಈ ಬೋರ್ಡ್ ಹಾಕಿಸಿ ಎಂದು ಹೇಳಿದ್ದಾರೆ.

ಸರಕಾರಿ ಗುತ್ತಿಗೆದಾರರು ಲಂಚದ ಆರೋಪ ಮಾಡಿರು ವುದು ಸಚಿವರ ಮೇಲೆಯೇ ಹೊರತು ಅಧಿಕಾರಿಗಳ ಮೇಲ ಲ್ಲ. ಅಧಿಕಾರಿಗಳನ್ನು ತೋರಿಸಿ ಲಂಚ/ಕಮಿಷನ್ ಆರೋ ಪದಿಂದ ತಪ್ಪಿಸಿಕೊಳ್ಳುವ ಪ್ರಯತ್ನ ಬೇಡ. ಲಂಚಾವತಾರ ನಾಟಕದಲ್ಲಿ ಅಧಿಕಾರಿಗಳದ್ದು ಪೋಷಕ ಪಾತ್ರ. ರಾಜ್ಯ ಬಿಜೆಪಿ ಸರಕಾರದ ಇಲಾಖಾ ಸಚಿವರದ್ದೇ ಮುಖ್ಯ ಪಾತ್ರ ಎಂದು ಆರೋಪಿಸಿದ್ದಾರೆ. ಸಚಿವ ರಿಂದ ರಕ್ಷಣೆಯ ಅಭಯವಿಲ್ಲದೇ ಯಾವ ಅಧಿಕಾರಿಯೂ ಲಂಚಕ್ಕೆ ಕೈಯೊಡ್ಡುವ ಸಾಹಸ ಮಾಡುವುದಿಲ್ಲ. ಸಚಿವರು ಪ್ರಾಮಾಣಿಕವಾಗಿದ್ದಾಗ ಸರಕಾರಿ ಅಧಿಕಾರಿಗಳು ಕೂಡಾ ಪ್ರಾಮಾಣಿಕರಾಗಿರುತ್ತಾರೆ. ಸಚಿವರು ಭ್ರಷ್ಟರಾದಾಗ 'ಯಥಾ ರಾಜಾ ತಥಾ ಪ್ರಜಾ' ಅಷ್ಟೆ. ಈ ಬೋರ್ಡ್ ಬರೆಸಿ ಹಾಕುವ ನಾಟಕಗಳನ್ನೆಲ್ಲ ನಿಲ್ಲಿಸಿ. ಮೊದಲು 40 ಪರ್ಸೆಂಟ್ ಕಮಿಷನ್ ಆರೋಪ ಸೇರಿ ದಂತೆ ಸಚಿವರುಗಳ ಮೇಲಿನ ಭ್ರಷ್ಟಾಚಾರದ ಆರೋಪಗಳ ಬಗ್ಗೆ ನ್ಯಾಯಾಂಗ ತನಿಖೆಗೆ ಆದೇಶ ಹೊರಡಿಸಿ ಎಂದು ಆಗ್ರಹಿಸಿದ್ದಾರೆ.

ಬಸವರಾಜ ಬೊಮ್ಮಾಯಿ ಅವರೇ, ಸರಕಾರಿ ಕಚೇರಿಗಳಲ್ಲಿ ಲಂಚ ಕೊಡಬೇಕಾಗಿಲ್ಲ ಎಂಬ ಬೋರ್ಡ್ ಅಳವಡಿಸುವ ಮೊದಲು ಎಲ್ಲ ಸರಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿ. ನೊಂದ ಜನರು ದೂರು ಕೊಟ್ಟರೆ ಭ್ರಷ್ಟ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಮಕೈಗೊಳ್ಳಿ.

- ಸಿದ್ದರಾಮಯ್ಯ ವಿಧಾನಸಭೆ ಪ್ರತಿಪಕ್ಷ ನಾಯಕ

ದಾಳಿಯ ಸತ್ಯಾಂಶ ಜನರ ಮುಂದಿಡಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಪಿಎಫ್‌ಐ ಸಂಘಟನೆ ಮೇಲೆ ರಾಜ್ಯ ಪೊಲೀಸರು ದಾಳಿ ನಡೆಸಿ ಆ ಸಂಘಟನೆಯ ಹಲವರನ್ನು ಬಂಧಿಸಿದ್ದು, ಆ ಬಗ್ಗೆ ರಾಜ್ಯದ ಜನತೆಯ ಮುಂದೆ ವಾಸ್ತವಾಂಶವಿಡಬೇಕು ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದರು.

ಜೆಪಿ ಭವನದಲ್ಲಿ ಮಾತನಾಡಿದ ಅವರು, ರಾಜ್ಯ ಸರಕಾರದ ಮೇಲೆ ಅನೇಕ ಆರೋಪಗಳಿವೆ. ನಾನು ಸ್ವತಃ ಬಿಎಂಎಸ್ ಶಿಕ್ಷಣ ಟ್ರಸ್ಟ್ ನಲ್ಲಿ ನಡೆದಿರುವ ಅಕ್ರಮ ಬಗ್ಗೆ ಸದನದಲ್ಲಿಯೇ ದಾಖಲೆಗಳ ಸಮೇತ ಮಾಹಿತಿ ನೀಡಿದ್ದೆ. ಇದಲ್ಲದೆ, ಅನೇಕ ಹಗರಣ, ಅಕ್ರಮಗಳ ಬಗ್ಗೆ ಜನರು ರೋಸಿ ಹೋಗಿದ್ದಾರೆ. ಒಂದು ವೇಳೆ ಪಿಎಫ್‌ಐ ಮೇಲೆ ನಡೆದಿರುವ ದಾಳಿ ಕುರಿತು ನೈಜ ಮಾಹಿತಿ ಕೊಡದಿದ್ದರೆ, ಆರೋಪ ಮತ್ತು ಹಗರಣಗಳ ಕುರಿತು ಜನರ ಗಮನ ಬೇರೆಡೆಗೆ ಸೆಳೆಯಲು ಈ ದಾಳಿ ನಡೆಸಲಾಗಿದೆ ಎಂದು ಭಾವಿಸಬೇಕಾಗುತ್ತದೆ ಎಂದರು.

ನಿಜವಾಗಿಯೂ ಸಮಾಜಘಾತುಕ ಶಕ್ತಿ ಬಗ್ಗೆ ಮಾಹಿತಿ ಇದ್ದರೆ ಜನರ ಮುಂದೆ ಇಡಬೇಕು. ನೆಪಗಳನ್ನು ಹೇಳಿ ಸರಕಾರ ನುಣುಚಿಕೊಳ್ಳಬಾರದು. ಮಧ್ಯರಾತ್ರಿ ಕಾರ್ಯಾಚರಣೆಯಲ್ಲಿ ಯಾರನ್ನು ಬಂಧನ ಮಾಡಿದ್ದಾರೆ. ಅವರ ಸಮಾಜಘಾತುಕ ಕೆಲಸ ಏನು? ಎಂಬುದನ್ನು ಹೇಳದಿದ್ದರೆ ಹಲವು ಅನುಮಾನಕ್ಕೆ ಕಾರಣವಾಗುತ್ತದೆ.

- ಎಚ್.ಡಿ.ಕುಮಾರಸ್ವಾಮಿ ಮಾಜಿ ಮುಖ್ಯಮಂತ್ರಿ



ಎರಡು ದಿನಗಳಿಂದ ಕರ್ನಾಟಕವೂ ಸೇರಿ ರಾಷ್ಟ್ರಮಟ್ಟದಲ್ಲಿ ಪಿಎಫ್‌ಐ ಮೇಲೆ ಎನ್‌ಐಎನಿಂದ ದಾಳಿ ಆಗಿತ್ತು. ಆ ದಾಳಿ ಸಮಯದಲ್ಲಿ ಪಿಎಫ್‌ಐ ಸಂಘಟನೆಗಳ ವ್ಯಕ್ತಿಗಳ ಬಂಧನವೂ ಆಗಿತ್ತು. ಮತ್ತೆ ಕಳೆದ ರಾತ್ರಿ ರಾಜ್ಯದ ನಾನಾ ಭಾಗದಲ್ಲಿ ಮಧ್ಯರಾತ್ರಿ ಪೊಲೀಸರು ಕಾರ್ಯಾಚರಣೆ ನಡೆಸಿದ್ದಾರೆ. ರಾಜ್ಯ ಪೊಲೀಸರು ನಡೆಸಿದ ದಾಳಿಯಲ್ಲಿ ಸಂಘಟನೆಯ ಕಾರ್ಯಕರ್ತರು, ಜಿಲ್ಲಾ ಅಧ್ಯಕ್ಷರ ಬಂಧನವಾಗಿದೆ. ಮಧ್ಯರಾತ್ರಿಯಲ್ಲಿ ಕಾರ್ಯಾಚರಣೆ ಎನ್ನುವುದು ಸರಕಾರದ ಆದೇಶವೋ ಅಥವಾ ಪೊಲೀಸರ ಮಾಹಿತಿ ಆಧಾರದ ದಾಳಿಯ ಆಗಿದೆಯೋ ಗೊತ್ತಿಲ್ಲ. ಆದರೆ, ಕಾರ್ಯಾಚರಣೆ ಬಗ್ಗೆ ನಾಡಿನ ಜನರ ಮುಂದೆ ನಿಜವಾದ ವಾಸ್ತವವಾದ ಅಂಶ ಸರಕಾರ ಇಡಬೇಕು ಎಂದು ಆಗ್ರಹಿಸಿದರು.

ಈ ಬೆಳವಣಿಗೆಯಿಂದ ರಾಜ್ಯದಲ್ಲಿ ಯಾವುದೇ ಸಮಾಜದ ಮೇಲೆ ಆತಂಕ, ಭಯ ಸೃಷ್ಟಿ ಆಗಬಾರದು. ಇತ್ತೀಚೆಗೆ ಅನೇಕ ಸಂಘಟನೆಗಳು ತಮ್ಮ ಅಜೆಂಡಾ ಪೂರೈಸಲು ಕೆಲಸ ಮಾಡುತ್ತಿವೆ. ಅವುಗಳಿಗೆ ಆರ್ಥಿಕ ಶಕ್ತಿ ಹೇಗೆ ಬರ್ತಿದೆ? ಕೆಲ ಘಟನೆಗಳ ಹಿಂದೆ ಯಾವ ಸಂಘಟನೆಗಳಿವೆ ಎನ್ನುವುದನ್ನು ತನಿಖೆಯಿಂದ ಹೊರಬರಬೇಕು ಎಂದರು.

ನಾಳೆಯಿಂದ ದಸರಾ ಆರ್ಟಿಸಾನ್ ಬಜಾರ್

ಬೆಂಗಳೂರು: ದಸರಾ ಹಬ್ಬದ ಹಿನ್ನೆಲೆಯಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ತಿನಲ್ಲಿ ಆರ್ಟಿಸನ್ ಬಜಾರ್‌ನ್ನು ಸೆ.29ರಿಂದ ಅ.9ರವರೆಗೆ ಆಯೋಜಿಸಲಾಗಿದೆ. ಪ್ರತಿದಿನ ಬೆಳಗ್ಗೆ 11ರಿಂದ ಸಂಜೆ 7ರವರೆಗೆ 11 ದಿನಗಳ ಕಾಲ ನಡೆಯಲಿರುವ ಈ ಮೇಳದಲ್ಲಿ ದೇಶದ ವಿವಿಧ ಭಾಗಗಳ ಕರಕುಶಲಕಾರರು ತಯಾರಿಸಿದ ತರಹೇವಾರಿ ಕರಕುಶಲ ವಸ್ತುಗಳು, ಆಟಿಕೆಗಳು, ಉಡುಪುಗಳು,ಹ್ಯಾಂಡ್ಲೂಂಗಳು, ಕರಕುಶಲ ವಸ್ತುಗಳು, ಬಟ್ಟೆ, ಮರದ ಆಟಿಕೆಗಳು, ಹೆಂಗಳೆಯರ ಆಕರ್ಷಣೆಗೆಂದು ಆಭರಣಗಳು, ಬೆಡ್ ಲೈನೆನ್ ಕಲಾಕೃತಿಗಳು, ಪೀಠೋಪಕರಣಗಳು, ಮ್ಯಾಟ್ ಗಳು, ಪಿಂಗಾಣಿ ವಸ್ತುಗಳು ಸೇರಿದಂತೆ ನೂರಾರು ಬಗೆಯ ಉತ್ಪನ್ನಗಳು ಇರಲಿವೆ.

ಸೇಂಟ್ ಜೋಸೆಫ್ಸ್ ವಿಶ್ವವಿದ್ಯಾಲಯ ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು

ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದೊಂದಿಗೆ ತರಬೇತಿ ಅಗತ್ಯ

ಬೆಂಗಳೂರು: ಎಲ್ಲ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದೊಂದಿಗೆ, ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಅಗತ್ಯ ತರಬೇತಿಯನ್ನು ನೀಡಲು ಕ್ರಮವಹಿಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟರು.

ಸೇಂಟ್ ಜೋಸೆಫ್ಸ್ ವಿಶ್ವವಿದ್ಯಾಲಯ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿ ಶಿಕ್ಷಣ ಮುಖ್ಯ ಪಾತ್ರ ವಹಿಸುವುದರಿಂದ ಸಮಾಜದಲ್ಲಿ ಉತ್ತಮ ರೀತಿಯ ಬದಲಾವಣೆ ತರಲು ಗುಣಮಟ್ಟದ ಶಿಕ್ಷಣ ಅತ್ಯಗತ್ಯ. ದೇಶ ಅಭಿವೃದ್ಧಿ ಹೊಂದಬೇಕಾದರೆ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಅಭಿವೃದ್ಧಿ ಹೊಂದಬೇಕು. ಭಾರತದಲ್ಲಿರುವ ಶಿಕ್ಷಣ ಸಂಸ್ಥೆಗಳು ವಿಶ್ವದಲ್ಲೇ ಅತ್ಯಂತ ಉತ್ತಮ ಶಿಕ್ಷಣ ಸಂಸ್ಥೆಗಳಾಗಿ ಮಾರ್ಪಡಿಸಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು.

ಸೇಂಟ್ ಜೋಸೆಫ್ಸ್ ಶಿಕ್ಷಣ ಸಂಸ್ಥೆ ನೂರು ವರ್ಷಕ್ಕೂ ಹೆಚ್ಚಿನ ಕಾಲ ಶಿಕ್ಷಣ ಕ್ಷೇತ್ರಕ್ಕೆ ಬಹಳಷ್ಟು ಕೊಡುಗೆ ನೀಡಿದ್ದು, ಕೇವಲ ಕರ್ನಾಟಕ ರಾಜ್ಯ ಮಾತ್ರವಲ್ಲದೇ, ದೇಶವೇ ಹೆಮ್ಮೆ ಪಡುವ ವಿಷಯವಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿ 2020 ದೇಶದ ಶಿಕ್ಷಣದ ಗುಣಮಟ್ಟ ವೃದ್ಧಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸಿದ್ದು, ಇದು ಶೈಕ್ಷಣಿಕ ಕ್ಷೇತ್ರದಲ್ಲಿ ಸಕಾರಾತ್ಮಕ ಬದಲಾವಣೆ ತರುವಲ್ಲಿ ಸಹಕಾರಿಯಾಗಲಿದೆ ಎಂದು ತಿಳಿಸಿದರು.



ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೇಂಟ್ ಜೋಸೆಫ್ ವಿಶ್ವವಿದ್ಯಾಲಯ ಉದ್ಘಾಟಿಸಿದರು. ಈ ವೇಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಥ್, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಚಿವ ಅಶ್ವತ್ಥ ನಾರಾಯಣ್, ಆರ್ಚ್ ಬಿಷಪ್ ಡಾ. ಪೀಟರ್ ಮಾಚಾಡೋ, ಕುಲಪತಿ ಫಾದರ್ ಡೈನಿಸಿಯಸ್ ವಾಜ್ ಇದ್ದರು.

ವಿದ್ಯಾರ್ಥಿಗಳಿಗೆ ಮಾನವೀಯ ಗುಣ ನೀಡಬೇಕು: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ಶಿಕ್ಷಣ ಸಂಸ್ಥೆಗಳು ಜ್ಞಾನದ ಕೇಂದ್ರಗಳಾಗಿದ್ದು, ಮಾನವೀಯ ಹಾಗೂ ಸರಳ ವ್ಯಕ್ತಿತ್ವವನ್ನು ತನ್ನ ವಿದ್ಯಾರ್ಥಿಗಳಲ್ಲಿ ತುಂಬಬೇಕು. ದ್ರೌಪದಿ ಮುರ್ಮು ಅವರು ಅತ್ಯಂತ ಸರಳ ವ್ಯಕ್ತಿತ್ವದವರಾಗಿದ್ದು, ಶಿಕ್ಷಕರಾಗಿ, ಜನಪ್ರತಿನಿಧಿಯಾಗಿ, ರಾಜ್ಯಪಾಲರಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ರಾಷ್ಟ್ರಪತಿ ಅಭ್ಯರ್ಥಿಯಾಗಿ ನಾಮಾಂಕಿತರಾಗಿದ್ದ ಸಂದರ್ಭದಲ್ಲಿ ದೇವಾಲಯವನ್ನು ಸ್ವಚ್ಛಗೊಳಿಸುತ್ತಿದ್ದುದು ಅವರ ಸರಳ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿಯಾಗಿದೆ. ನಮ್ಮ ದೇಶದಲ್ಲಿ ಚರಿತ್ರೆ ಇದೆ. ಚಾರಿತ್ರ್ಯ ಬೇಕಾಗಿದೆ. ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ವಿಕಸನಗೊಳಿಸಲು ಅತ್ಯಂತ ಪ್ರಮುಖವಾಗಿರಾಜ್ಯಪಾಲ ಥಾವರ್ ಚಂದ್ ಗೆಹಲೋಥ್, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇದ್ದರು.

ಶಿಕ್ಷಣ ಸಂಸ್ಥೆಯನ್ನು ವಿಶ್ವವಿದ್ಯಾಲಯವನ್ನಾಗಿ ಮಾಡುವ ಕಾರ್ಯಕ್ರಮದಲ್ಲಿ ರಾಜ್ಯ ಸರಕಾರ ಸೇಂಟ್ ಜೋಸೆಫ್ ಪ್ರಥಮವಾಗಿ ಆಯ್ಕೆಮಾಡಿದ್ದು, ಸಂಸ್ಥೆಯ ಅಭಿವೃದ್ಧಿಗೆ ಪೂರಕವಾಗಲಿದೆ. ಸೇಂಟ್ ಜೋಸೆಫ್ ಶಿಕ್ಷಣ ಸಂಸ್ಥೆಯ ಶಿಕ್ಷಣ ಸೇವೆ ನಿರಂತರವಾಗಿ ಸಾಗಲಿ.

-ಬಸವರಾಜ ಬೊಮ್ಮಾಯಿ ಸಿಎಂ